All India Radio: Bangalore
National Bulletin In Kannada
25.11.2026 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
25.11.2026 19.35 hrs
<><><><>

ಮುಖ್ಯಾಂಶಗಳು

- ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣ ಉತ್ಪಾದನೆ ಉತ್ತೇಜಿಸಲು ೧೧ ಸಾವಿರ ಕೋಟಿ ರೂಪಾಯಿ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
- ಒಂದು ಸಾವಿರದ ೧೪೧ ಕೋಟಿ ರೂಪಾಯಿ ವೆಚ್ಚದ ಅಂಚೆ ಕಾರ್ಯಾಚರಣೆ ಯೋಜನೆ ಮುಂದುವರಿಕೆಗೆ ಕೇಂದ್ರ ಸಂಪುಟ ನಿರ್ಧಾರ
- ವಕೀಲ ವೃತ್ತಿಯಲ್ಲಿ ಮಹಿಳೆಯರಿಗೆ ಹೆಚ್ಚಿನ ಪ್ರಾತಿನಿಧ್ಯ ನೀಡುವುದು ಅಗತ್ಯ : ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್
- ೨೩ ವರ್ಷದೊಳಗಿನವರ ಬಿಮ್‌ಸ್ಟೆಕ್ ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಒಡಿಶಾದಲ್ಲಿ ಚಾಲನೆ
- ಐಸಿಸಿ ಟೆಸ್ಟ್ ಬೌಲಿಂಗ್ ಶ್ರೇಯಾಂಕದಲ್ಲಿ ಎರಡನೇ ಸ್ಥಾನಕ್ಕೇರಿದ ಜಸ್ಪ್ರೀತ್ ಬುಮ್ರಾ

<><><><>

ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣಗಳ ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ಬಲಪಡಿಸುವ ಯೋಜನೆಗೆ ೧೧ ಸಾವಿರ ಕೋಟಿ ರೂಪಾಯಿಗಳ ಆರ್ಥಿಕ ವೆಚ್ಚದೊಂದಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಇಂದು ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯ ಬಳಿಕ, ಸುದ್ದಿಗಾರರಿಗೆ ಸಂಪುಟ ನಿರ್ಧಾರಗಳ ಕುರಿತು ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣ ಸಿಐಇ ಮತ್ತು ಅದರ ಬಿಡಿಭಾಗಗಳ ದೇಶೀಯ ಉತ್ಪಾದನೆಗೆ ಪ್ರೋತ್ಸಾಹ ನೀಡುವುದು ದೇಶದಲ್ಲಿ ಪ್ರತ್ಯೇಕ ಸಿಐಇ ಪರೀಕ್ಷಾ ಸೌಲಭ್ಯ ಸ್ಥಾಪಿಸುವುದು ಇದರ ಉದ್ದೇಶವಾಗಿದೆ ಎಂದರು. ಭಾರೀ ಕೈಗಾರಿಕಾ ಸಚಿವಾಲಯದಿಂದ ಅನುಷ್ಠಾನಗೊಳ್ಳಲಿರುವ ಈ ಯೋಜನೆ ೨೦೨೬-೨೭ರಿಂದ ೨೦೩೩-೩೪ನೇ ಆರ್ಥಿಕ ವರ್ಷದವರೆಗೆ ೮ ವರ್ಷಗಳ ಅವಧಿಯನ್ನು ಹೊಂದಿದೆ ಎಂದು ತಿಳಿಸಿದರು. ಇದರ ಜೊತೆಗೆ ತಮಿಳುನಾಡಿನ ಕಾಮರಾಜಾರ್ ಪೋರ್ಟ್ ಲಿಮಿಟೆಡ್-ಕೆಪಿಎಲ್‌ನಲ್ಲಿ ೨ನೇ ಕಂಟೈನರ್ ಟರ್ಮಿನಲ್ ಅಭಿವೃದ್ಧಿಗೂ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ೪ ಸಾವಿರದ ೨೮೮ ಕೋಟಿ ರೂಪಾಯಿಗೂ ಅಧಿಕ ವೆಚ್ಚದಲ್ಲಿ ಟರ್ಮಿನಲ್ ನಿರ್ಮಾಣ ಕೈಗೆತ್ತಿಕೊಳ್ಳಲಾಗುವುದು. ಈ ಟರ್ಮಿನಲ್ ತಮಿಳುನಾಡು, ಕರ್ನಾಟಕ ಮತ್ತು ಆಂಧ್ರಪ್ರದೇಶದ ಕೈಗಾರಿಕಾ ಪ್ರದೇಶಗಳು ಸರಕು ಸಾಗಾಣಿಕೆಗೆ ಹೆಚ್ಚಿನ ನೆರವು ನೀಡಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ಧ್ವನಿ : ಅಶ್ವಿನಿ ವೈಷ್ಣವ್

೧೬ನೇ ಹಣಕಾಸು ಆಯೋಗದ ಅವಧಿಯಲ್ಲಿ ೧ ಸಾವಿರದ ೧೪೧ ಕೋಟಿ ರೂಪಾಯಿಗಳ ಪ್ರಸ್ತಾವಿತ ವೆಚ್ಚದೊಂದಿಗೆ ಅಂಚೆ ಕಾರ್ಯಾಚರಣೆ ಯೋಜನೆಯನ್ನು ಮುಂದುವರಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ದೇಶಾದ್ಯಂತ ಅಂಚೆ ಮೂಲಸೌಕರ್ಯ ಬಲಪಡಿಸಲು ಕಾರ್ಯಾಚರಣೆಯ ದಕ್ಷತೆ ಹೆಚ್ಚಿಸಲು ಈ ಯೋಜನೆ ಉದ್ದೇಶಿಸಿದೆ. ಇದೇ ವೇಳೆ ಅಂಚೆ ಕಚೇರಿಗಳ ನವೀಕರಣ ಮತ್ತು ಪಾರಂಪರಿಕ ಕಟ್ಟಡಗಳ ಸಂರಕ್ಷಣೆಗಾಗಿ ಒಂದು ಸಾವಿರದ ೪೯೧ ಕೋಟಿ ರೂಪಾಯಿ ವೆಚ್ಚದ ಎಸ್ಟೇಟ್ಸ್ ನಿರ್ವಹಣಾ ಯೋಜನೆಯ ಮುಂದುವರಿಕೆಗೂ ಸಂಪುಟ ಅನುಮೋದನೆ ನೀಡಿದೆ. ಇನ್ನು ಅಸ್ಸಾಂನ ಸಿಲ್ಚಾರ್‌ನ ಡೋಲೂ ಎಂಬಲ್ಲಿ ೨ ಸಾವಿರದ ೧೪ ಕೋಟಿ ರೂಪಾಯಿ ವೆಚ್ಚದಲ್ಲಿ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣದ ಅಭಿವೃದ್ಧಿಗೆ ಸಂಪುಟ ಅನುಮೋದನೆ ನೀಡಿದೆ. ೧೨ ಸಾವಿರ ಚದರ ಮೀಟರ್‌ಗೂ ಅಧಿಕ ವಿಸ್ತೀರ್ಣದಲ್ಲಿ ನಿರ್ಮಾಣವಾಗಿರುವ ನೂತನ ಟರ್ಮಿನಲ್ ಕಟ್ಟಡ ಗರಿಷ್ಠ ಅವಧಿಯಲ್ಲಿ ೮೦೦ ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯ ಹೊಂದಿರಲಿದ್ದು, ದಕ್ಷಿಣ ಅಸ್ಸಾಂ ಮತ್ತು ನೆರೆಯ ರಾಜ್ಯಗಳ ವಾಯು ಸಂಚಾರ ಬೇಡಿಕೆಯನ್ನು ಪೂರೈಸಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

<><><><>

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ನವದೆಹಲಿಯಲ್ಲಿಂದು 'ಸಮಾವೇಶ್' ಮತ್ತು ನೂತನ ಇ-ಅನುದಾನ ಪೋರ್ಟಲ್‌ಗಳಿಗೆ ಚಾಲನೆ ನೀಡಿದರು. ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ದಾಖಲಾತಿ ಪ್ರಕ್ರಿಯೆಯನ್ನು ಕಡಿಮೆ ಮಾಡಿ, ಆಡಳಿತಾತ್ಮಕ ದಕ್ಷತೆಯನ್ನು ಸುಧಾರಿಸಿ ಮತ್ತು ಸುಗಮ ಕಾರ್ಯನಿರ್ವಹಣೆಯನ್ನು ಉತ್ತೇಜಿಸುವ ಮೂಲಕ ಸಚಿವಾಲಯದ ವಿವಿಧ ಯೋಜನೆಗಳ ಅನುಷ್ಠಾನವನ್ನು ಬಲಪಡಿಸಲು ಈ ಪೋರ್ಟಲ್‌ಗಳು ಸಹಾಯ ಮಾಡಲಿವೆ ಎಂದರು. ಕಾರ್ಯಕ್ರಮದಲ್ಲಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ಬಿ.ಎಲ್. ವರ್ಮಾ ಪಾಲ್ಗೊಂಡಿದ್ದರು.

<><><><>

ಅಭಿವೃದ್ಧಿಯ ಜೊತೆಗೆ ಮಹಿಳಾ ಸುರಕ್ಷತೆ, ಘನತೆ ಮತ್ತು ಆರ್ಥಿಕ ಸ್ವಾವಲಂಬನೆ ಒಟ್ಟಿಗೆ ಸಾಗಬೇಕು ಎಂದು ಕೇಂದ್ರ ಕೃಷಿ, ರೈತರ ಕಲ್ಯಾಣ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ರಾಷ್ಟ್ರೀಯ ಲಿಂಗ ಸಮಾನತೆ ಅಭಿಯಾನವಾದ 'ನಯೀ ಚೇತನಾ- ಪಹಲ್ ಬದಲಾವ್ ಕೆ'ಯ ಐದನೇ ಆವೃತ್ತಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಮಹಿಳಾ ಸಬಲೀಕರಣ ಕೇವಲ ಅವರ ಹಕ್ಕುಗಳನ್ನು ರಕ್ಷಿಸುವುದಕ್ಕೆ ಸೀಮಿತವಾಗಿಲ್ಲ, ಬದಲಾಗಿ ಅವರು ನಾಯಕತ್ವ ವಹಿಸಲು, ನಿರ್ಧಾರಗಳನ್ನು ತೆಗೆದುಕೊಳ್ಳಲು ಹಾಗೂ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ಸಮಾನವಾಗಿ ಭಾಗವಹಿಸಲು ಅನುವು ಮಾಡಿಕೊಡುವುದನ್ನು ಒಳಗೊಂಡಿದೆ ಎಂದು ಸಚಿವರು ತಿಳಿಸಿದರು.

<><><><>

ವಕೀಲವೃತ್ತಿಯಲ್ಲಿ ಮಹಿಳೆಯರಿಗೆ ಹೆಚ್ಚಿನ ಪ್ರಾತಿನಿಧ್ಯ ನೀಡಬೇಕು ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಕರೆ ನೀಡಿದ್ದಾರೆ.

ನವದೆಹಲಿಯಲ್ಲಿಂದು ನಡೆದ ಚೊಚ್ಚಲ ಶಶಿ ಪ್ರಭಾ ಸಿಂಗ್ ಸ್ಮಾರಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಹಿರಿಯ ವಕೀಲರು ತಮ್ಮ ಕಚೇರಿಗಳಲ್ಲಿ ಕನಿಷ್ಠ ೩ನೇ ಒಂದು ಭಾಗದಷ್ಟು, ಮಹಿಳಾ ಕಿರಿಯ ವಕೀಲರು ಇರುವಂತೆ ನೋಡಿಕೊಳ್ಳಬೇಕು. ವಕೀಲರ ಸಂಘದಲ್ಲಿ ಮಹಿಳಾ ಭಾಗವಹಿಸುವಿಕೆ ಮತ್ತು ಪ್ರಾತಿನಿಧ್ಯವನ್ನು ಬಲಪಡಿಸಲು ಹೆಚ್ಚಿನ ಮಹಿಳೆಯರನ್ನು ಪ್ಯಾನಲ್ ವಕೀಲರನ್ನಾಗಿ ನೇಮಿಸುವ ಅಗತ್ಯವಿದೆ ಎಂದರು.

<><><><>

೫೭ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಅಂಗವಾಗಿ ಇಂದು ಸಿನಿಮಾದ ಸಂಭ್ರಮ ಎಂಬ ಧ್ಯೇಯವಾಕ್ಯದಡಿ ಭವ್ಯ ಸ್ತಬ್ಧಚಿತ್ರಗಳ ಮೆರವಣಿಗೆಯನ್ನು ಆಯೋಜಿಸಲಾಗಿದೆ. ಈ ಮೆರವಣಿಗೆ ಸಾಂಟಾ ಮೊನಿಕಾ ಪ್ರವಾಸೋದ್ಯಮ ಜೆಟ್ಟಿಯಿಂದ ಕಲಾ ಅಕಾಡೆಮಿಯವರೆಗೆ ಬಣ್ಣಬಣ್ಣದ ಸ್ತಬ್ಧಚಿತ್ರಗಳು, ವೈವಿಧ್ಯಮಯ ಸಾಂಸ್ಕೃತಿಕ ಪ್ರದರ್ಶನಗಳು ಮತ್ತು ಗೋವಾದ ಶ್ರೀಮಂತ ಪರಂಪರೆಯನ್ನು ಅನಾವರಣಗೊಳಿಸುತ್ತಿದೆ. ಅತ್ಯುತ್ತಮ ಸ್ತಬ್ಧಚಿತ್ರ ಪ್ರಶಸ್ತಿಗಾಗಿ ಐದು ತಂಡಗಳು ಸ್ಪರ್ಧಿಸಿದ್ದು, ವಿಜೇತ ತಂಡಕ್ಕೆ ಮೂರು ಲಕ್ಷ ರೂಪಾಯಿ ನಗದು ಬಹುಮಾನ ನೀಡಲಾಗುತ್ತಿದೆ.

<><><><>

ಸಂಗೀತ ಕ್ಷೇತ್ರದ ದಂತಕಥೆಗಳಾದ ಲತಾ ಮಂಗೇಶ್ಕರ್, ಆಶಾ ಬೋಸ್ಲೆ ಮತ್ತು ಎಸ್.ಜಾನಕಿ ಅವರ ಧ್ವನಿಗಳು ಇಂದಿಗೂ ಸಂಗೀತಗಾರರ ಪೀಳಿಗೆಗಳಿಗೆ ಸ್ಫೂರ್ತಿಯ ಸೆಲೆಯಾಗಿದೆ ಎಂದು ಖ್ಯಾತ ಹಿನ್ನೆಲೆ ಗಾಯಕಿ ಕೆ.ಎಸ್.ಚಿತ್ರ ಅಭಿಪ್ರಾಯಪಟ್ಟಿದ್ದಾರೆ. ಗೋವಾದಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಲತಾ ಮಂಗೇಶ್ಕರ್ ಟಾಕ್, ಶಾಶ್ವತವಾಗಿ ಪ್ರತಿಧ್ವನಿಸುವ ದನಿ - ಆಶಾ ಬೋಸ್ಲೆ, ಎಸ್.ಜಾನಕಿ ಅವರ ನೆನಪಿನಲ್ಲಿ ಎಂಬ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಸ್.ಜಾನಕಿ ಅವರು ತೋರುತ್ತಿದ್ದ ವಾತ್ಸಲ್ಯವನ್ನು ಸ್ಮರಿಸಿದ್ದಾರೆ. ಕಾರ್ಯಕ್ರಮದಲ್ಲಿ ರಸಪ್ರಶ್ನೆ ಕಾರ್ಯಕ್ರಮವೂ ನಡೆಯಿತು.

<><><><>

ಜಲ ಜೀವನ್ ಮಿಷನ್ ೨.೦ ಅಡಿಯಲ್ಲಿ ನೀರು ಸರಬರಾಜು ಕಾರ್ಯಾಚರಣೆ ಮತ್ತು ನಿರ್ವಹಣಾ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವಾದ 'ನಲ್ ಜಲ್ ಮಿತ್ರ'ಕ್ಕಾಗಿ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ತರಬೇತಿ ಮಹಾನಿರ್ದೇಶನಾಲಯ ಇಂದು ತಿಳಿವಳಿಕಾ ಒಪ್ಪಂದಕ್ಕೆ ಸಹಿ ಹಾಕಿವೆ.

<><><><>

ಚೊಚ್ಚಲ 'ಬಿಮ್‌ಸ್ಟೆಕ್ ೨೩ ವರ್ಷದೊಳಗಿನವರ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ಗೆ ಒಡಿಶಾದ ಭುವನೇಶ್ವರದ ಪ್ರತಿಷ್ಠಿತ ಕಳಿಂಗ ಕ್ರೀಡಾಂಗಣದಲ್ಲಿಂದು ಚಾಲನೆ ದೊರೆತಿದೆ. ಮೂರು ದಿನಗಳ ಕಾಲ ನಡೆಯುತ್ತಿರುವ ಈ ಕ್ರೀಡಾಕೂಟದಲ್ಲಿ ಆರು ರಾಷ್ಟ್ರಗಳು ಭಾಗವಹಿಸಿದ್ದು, ಒಟ್ಟು ೩೨ ಪದಕ ಸ್ಪರ್ಧೆಗಳು ನಡೆಯುತ್ತಿವೆ. ಬಾಂಗ್ಲಾದೇಶ, ಭೂತಾನ್, ನೇಪಾಳ, ಶ್ರೀಲಂಕಾ, ಮ್ಯಾನ್ಮಾರ್ ಮತ್ತು ಆತಿಥೇಯ ಭಾರತ ಸೇರಿದಂತೆ ಆರು ರಾಷ್ಟ್ರಗಳ ೨೦೦ಕ್ಕೂ ಹೆಚ್ಚು ಕ್ರೀಡಾಪಟುಗಳು ಇದರಲ್ಲಿ ಪಾಲ್ಗೊಂಡಿದ್ದಾರೆ.

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹಾಗೂ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ಆಶ್ರಯದಲ್ಲಿ, ಒಡಿಶಾ ಸರ್ಕಾರದ ಸಹಯೋಗದೊಂದಿಗೆ 'ಭಾರತೀಯ ಅಥ್ಲೆಟಿಕ್ಸ್ ಒಕ್ಕೂಟ' ಈ ಬಿಮ್‌ಸ್ಟೆಕ್ ಕ್ರೀಡಾಕೂಟವನ್ನು ಆಯೋಜಿಸುತ್ತಿದೆ. ಲುಧಿಯಾನದಲ್ಲಿ ಇತ್ತೀಚೆಗೆ ನಡೆದ '೨೩ ವರ್ಷದೊಳಗಿನವರ ಇಂಡಿಯನ್ ಓಪನ್' ಮತ್ತು ಚೆನ್ನೈನಲ್ಲಿ ನಡೆದ 'ಜೂನಿಯರ್ ನ್ಯಾಷನಲ್ಸ್' ಮೂಲಕ ಆಯ್ಕೆಯಾದ ೭೦ ಸದಸ್ಯರ ತಂಡವನ್ನು ಭಾರತ ಕಣಕ್ಕಿಳಿಸಿದೆ.

<><><><>

ನ್ಯೂಜಿಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ತೋರಿದ ಅಮೋಘ ಪ್ರದರ್ಶನದ ಬೆನ್ನಲ್ಲೇ ಭಾರತದ ಅಗ್ರ ಬೌಲರ್ ಜಸ್ಪ್ರೀತ್ ಬುಮ್ರಾ, ಐಸಿಸಿ ಪುರುಷರ ಟೆಸ್ಟ್ ಬೌಲರ್‌ಗಳ ಶ್ರೇಯಾಂಕದಲ್ಲಿ ಮೂರು ಸ್ಥಾನಗಳ ಬಡ್ತಿ ಪಡೆದು ಜಂಟಿಯಾಗಿ ಎರಡನೇ ಸ್ಥಾನಕ್ಕೇರಿದ್ದಾರೆ. ಇಂಗ್ಲೆಂಡ್ ವೇಗಿ ಓಲಿ ರಾಬಿನ್ಸನ್ ಅವರೊಂದಿಗೆ ಎರಡನೇ ಸ್ಥಾನವನ್ನು ಬುಮ್ರಾ ಹಂಚಿಕೊಂಡಿದ್ದಾರೆ. ಬ್ಯಾಟಿಂಗ್ ಶ್ರೇಯಾಂಕದಲ್ಲಿ ಭಾರತದ ಬ್ಯಾಟರ್‌ಗಳು ಸಹ ಸುಧಾರಣೆ ಕಂಡಿದ್ದು, ರಿಷಭ್ ಪಂತ್ ಒಂದು ಸ್ಥಾನ ಮೇಲೇರಿ ಆರನೇ ಸ್ಥಾನಕ್ಕೆ, ಶುಭಮನ್ ಗಿಲ್ ಮೂರು ಸ್ಥಾನಗಳ ಜಿಗಿತದೊಂದಿಗೆ ಏಳನೇ ಸ್ಥಾನಕ್ಕೆ ಮತ್ತು ಯಶಸ್ವಿ ಜೈಸ್ವಾಲ್ ಐದು ಸ್ಥಾನಗಳ ಬಡ್ತಿ ಪಡೆದು ಒಂಬತ್ತನೇ ಸ್ಥಾನಕ್ಕೆ ತಲುಪುವ ಮೂಲಕ ಅಗ್ರ ಹತ್ತರಲ್ಲಿ ಸ್ಥಾನ ಪಡೆದಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>